ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿರುವ ನಮೂನೆ 50, 53 ಮತ್ತು 57ರಲ್ಲಿ ಸಲ್ಲಿಕೆಯಾದ ಅರ್ಜಿಗಳ ಕುರಿತು

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ) –

1022(1218) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅಕ್ರಮ ಸಕ್ರಮ ಯೋಜನೆಯಲ್ಲಿ ನಮೂನೆ 50, 53ರಲ್ಲಿ ರೈತರಿಂದ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು; ಸಮಿತಿಯಲ್ಲಿ ಮಂಜೂರಾತಿ ನೀಡಿದ ಅರ್ಜಿಗಳ ಸಂಖ್ಯೆ ಎಷ್ಟು; ಹಕ್ಕುಪತ್ರ ನೀಡಿದ ಪ್ರಕರಣಗಳ ಸಂಖ್ಯೆ ಎಷ್ಟು; ಸಮಿತಿಯಲ್ಲಿ ಮಂಜೂರಾತಿ ನೀಡಿ ಹಕ್ಕುಪತ್ರ ನೀಡದೇ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; ವಿಚಾರಣೆಯ ಹಂತದಲ್ಲಿರುವ ಮತ್ತು ತಿರಸ್ಕೃತವಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು, ನಮೂನೆವಾರು ಮಾಹಿತಿಯನ್ನು ಸಲ್ಲಿಸುವುದು)

(ಆ) ರಾಜ್ಯದಲ್ಲಿ ನಮೂನೆ 57ರಲ್ಲಿ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು; ಶಾಸನಬದ್ಧವಾಗಿ ದಿನಾಂಕ: 16.05.2019ರವರೆಗೂ ಅರ್ಜಿಯನ್ನು ಸಲ್ಲಿಸಲು ಅವಕಾಶವಿದ್ದರೂ ಮತ್ತು ರೈತರು ಅರ್ಜಿಯನ್ನು ಸಲ್ಲಿಸಲು ಬಂದರೂ ಮತ್ತು ಅಂಚೆ ಮೂಲಕ ಸಲ್ಲಿಸಿದರೂ ಉಡುಪಿ ಜಿಲ್ಲೆಯಲ್ಲಿ ಚುನಾವಣೆ ಕಾರಣ ನೀಡಿ 8 ದಿನಗಳು ಬಾಕಿಯಿರುವಾಗಲೇ ಅರ್ಜಿಯನ್ನು ಸ್ವೀಕರಿಸಲು ನಿರಾಕರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರೀತಿ ಅವಕಾಶ ವಂಚಿತರಾದ ರೈತರಿಗೆ ಮತ್ತೊಮ್ಮೆ ಅವಕಾಶ ನೀಡಲು ಸರ್ಕಾರದಿಂದ ಕೈಗೊಂಡ ಕ್ರಮವೇನು;

(ಇ) ಅಕ್ರಮ ಸಕ್ರಮ ಯೋಜನೆಯಲ್ಲಿ ಅರ್ಜಿ ಸಲ್ಲಿಸಿದ ರೈತರು ನೈಜ್ಯ ಕೃಷಿಯ ಗದ್ದೆ ತೋಟವನ್ನು ಹೊಂದಿದ್ದರೂ ಕೂಡ ಡೀಮ್ಡ್ ಫಾರೆಸ್ಟ್ ಪಟ್ಟಿಯಲ್ಲಿದೆ ಎನ್ನುವ ಕಾರಣ ನೀಡಿ ಹಕ್ಕುಪತ್ರವನ್ನು ನೀಡದೆ ಸತಾಯಿಸುತ್ತಿರುವುದರಿಂದ ರೈತರು ಮೂರು ದಶಕಗಳಿಂದ ಶೋಷಣೆಗೆ ಒಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಭೂ ಸ್ವಾಧೀನತೆಯನ್ನು ಹೊಂದಿ ಕೃಷಿಯನ್ನು ಮಾಡುತ್ತಿರುವ ರೈತರಿಗೆ ಈ ಭೂಮಿಯನ್ನು ಮಂಜೂರಾತಿ ಮಾಡಲು ಸರ್ಕಾರದ ಕ್ರಮವೇನು?